## ಕರ್ನಾಟಕಸರ್ಕಾರದನಡವಳಿಗಳು

ವಿಷಯ: ಭಾರತ ಸರ್ಕಾರದ ನಾಗರೀಕ ಹುದ್ದೆಗಳು ಮತ್ತು ಸೇವೆಗಳಲ್ಲಿ ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶಕ್ಕಾಗಿ ಆರ್ಥಿಕವಾಗಿ ದುರ್ಬಲ ವರ್ಗಗಳ ಮೀಸಲಾತಿ ಸೌಲಭ್ಯ ಪಡೆಯಲು ಅರ್ಹ ಅಭ್ಯರ್ಥಿ/ವಿದ್ಯಾರ್ಥಿಗಳಿಗೆ **'ಆದಾಯ ಮತ್ತು ಸ್ವತ್ತು ಪ್ರಮಾಣ ಪತ್ರ'** ಒದಗಿಸುವ ಕುರಿತು ಹೊರಡಿಸಲಾಗಿದ್ದ ಆದೇಶವನ್ನು ಹಿಂಪಡೆದು ಮರು ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ:

1. ಭಾರತ ಸರ್ಕಾರದ ಅಧಿಸೂಚನೆ ಸಂಖ್ಯೆ:PAUSHA22, 1940 (SAKA), Dated:12.01.2019.
2. ಭಾರತ ಸರ್ಕಾರದ ಸಿಬ್ಬಂದಿ, ಕುಂದು ಕೊರತೆ ಮತ್ತು ಪಿಂಚಣಿ ಮಂತ್ರಾಲಯದ ಅಧಿಕೃತ ಜ್ಞಾಪನ ಸಂಖ್ಯೆ:F.No.36039/1/2019-Estt. (Res.) Dated:19.01.2019 ಮತ್ತು ದಿನಾಂಕ:31.01.2019
3. ಸರ್ಕಾರಿ ಆದೇಶ ಸಂಖ್ಯೆ:ಹಿಂವಕ 75 ಬಿಸಿಎ 2019, ಬೆಂಗಳೂರು, ದಿನಾಂಕ:14.05.2019.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ:ಹಿಂವಕ:ಮಾಶಾ/ಸಿಆರ್-70/2018-19, ದಿ:25/03/2021.

* * * * * * * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ. (1)ರ ಅಧಿಸೂಚನೆಯಲ್ಲಿ ಭಾರತ ಸಂವಿಧಾನ (ಒಂದು ನೂರ ಮೂರನೇ ತಿದ್ದುಪಡಿ) ಕಾಯ್ದೆ, 2019ರನ್ವಯ ಅನುಚ್ಛೇದ 15(6)ರಲ್ಲಿ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಮತ್ತು 16(6)ರಲ್ಲಿ ನಾಗರಿಕ ಹುದ್ದೆಗಳಲ್ಲಿಆರ್ಥಿಕವಾಗಿ ದುರ್ಬಲ ವರ್ಗಗಳಿಗೆ ಗರಿಷ್ಟ ಶೇ.10ರಷ್ಟು ಮೀಸಲಾತಿ ಒದಗಿಸಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ. (2)ರ ಅಧಿಕೃತ ಜ್ಞಾಪನದಲ್ಲಿ ಭಾರತ ಸರ್ಕಾರದ ನಾಗರೀಕ ಹುದ್ದೆಗಳು ಮತ್ತು ಸೇವೆಗಳಲ್ಲಿ ನೇರ ನೇಮಕಾತಿ ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶಕ್ಕಾಗಿ ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ(EWSs) ಶೇ.10ರಷ್ಟು ಮೀಸಲಾತಿಯನ್ನು ದಿನಾಂಕ:01.02.2019ರಿಂದ ಅನ್ವಯವಾಗುವಂತ ಅವಕಾಶ ಕಲ್ಪಿಸಿ ಆದೇಶಿಸಲಾಗದೆ ಹಾಗೂ ಸದರಿ ಮೀಸಲಾತಿಯನ್ನು ಪಡೆಯಲು ಭಾರತ ಸರ್ಕಾರವು ದಿನಾಂಕ:31.01.2019ರಂದು ಹೊರಡಿಸಿರುವ ಅಧಿಕೃತ ಜ್ಞಾಪನದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ (ಕೇಂದ್ರ ಸರ್ಕಾರದ, ಕರ್ನಾಟಕಕ್ಕೆ ಸಂಬಂಧಿಸಿದ ಜಾತಿ ಪಟ್ಟಿಯಲ್ಲಿ ಇರುವಂತೆ) ಜಾತಿಗಳನ್ನು ಹೊರತುಪಡಿಸಿ, ಯಾವುದೇ ಕುಟುಂಬದ ವಾರ್ಷಿಕ ಆದಾಯ ರೂ.8.00ಲಕ್ಷಕ್ಕಿಂತ ಕಡಿಮೆ ಇರುವ ವ್ಯಕ್ತಿಯು ಆರ್ಥಿಕವಾಗಿ ದುರ್ಬಲ ವರ್ಗಗಳ ಮೀಸಲಾತಿಯನ್ನು ಪಡೆಯಲು ಅರ್ಹರಾಗಿರುತ್ತಾರೆ ಹಾಗೂ ಅಭ್ಯರ್ಥಿಯ ಕುಟುಂಬದ ಆದಾಯವನ್ನು ಲೆಕ್ಕಕ್ಕೆ ತೆಗೆದುಕೊಳ್ಳದೇ, ಈ ಕೆಳಕಂಡ

...2

ಸ್ವತ್ತುಗಳನ್ನು ಹೊಂದಿರುವ ಕುಟುಂಬದ ವ್ಯಕ್ತಿಯು ಸದರಿ ಮೀಸಲಾತಿ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ.

1. 5 acres of Agricultural Land and above;
2. Residential flat of 1000sq. ft and above;
3. Residential plot of 100sq. yards and above in notified municipalities;
4. Residential plot of 200 sq. yards and above din areas other than the notified municipalities;

ಮೇಲೆ ಓದಲಾದ ಕ್ರ.ಸಂ. (3)ರ ಆದೇಶದಲ್ಲಿ ಭಾರತ ಸರ್ಕಾರದ ನಾಗರೀಕ ಹುದ್ದೆಗಳು ಮತ್ತು ಸೇವೆಗಳಲ್ಲಿ ನೇರ ನೇಮಕಾತಿಯಲ್ಲಿ ಹಾಗೂ ಕೇಂದ್ರ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶಕ್ಕಾಗಿ ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ ಮೀಸಲಾತಿ ಕಲ್ಪಿಸುವ ಸಂಬಂಧ ರಾಜ್ಯದ 144 ಜಾತಿಗಳಿಗೆ ಅನ್ವಯವಾಗುವಂತೆ ಆರ್ಥಿಕವಾಗಿ ದುರ್ಬಲ ವರ್ಗಗಳ (EWSs) ಮೀಸಲಾತಿ ಕಲ್ಪಿಸಿ ಸರ್ಕಾರದ ಆದೇಶವನ್ನು ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ. (4)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರು ಕೇಂದ್ರ ಸರ್ಕಾರದ ನಾಗರೀಕ ಹುದ್ದೆಗಳು ಮತ್ತು ಸೇವೆಗಳಲ್ಲಿ ನೇರ ನೇಮಕಾತಿಯಲ್ಲಿ ಆರ್ಥಿಕವಾಗಿ ದುರ್ಬಲ ವರ್ಗಗಳಿಗೆ ಮೀಸಲಾತಿ ಕಲ್ಪಿಸುವ ಸಂಬಂಧ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 75 ಬಿಸಿಎ 2019, ದಿನಾಂಕ:14.05.2019 ರ ಆದೇಶದ ಅನುಬಂಧ-2ರಲ್ಲಿ ಸೇರ್ಪಡೆಯಾಗುವ ಜಾತಿಗಳಲ್ಲಿ ಕೇಂದ್ರ ಸರ್ಕಾರದ ಇತರೆ ಹಿಂದುಳಿದ ವರ್ಗಗಳ ಜಾತಿ ಪಟ್ಟಿಯಲ್ಲಿ ನಮೂದಾಗಿರುವ ಕೆಲವು ಜಾತಿಗಳು ಆರ್ಥಿಕ ದುರ್ಬಲ ವರ್ಗಗಳ ಮೀಸಲಾತಿಯಡಿಯಲ್ಲಿಯೂ ನಮೂದಾಗಿರುತ್ತವೆ. ಈ ಜಾತಿಗಳು ಎರಡು ಕಡೆಯೂ ಮೀಸಲಾತಿ ಪಡೆಯಲು ಅರ್ಹರಾಗಿರುತ್ತಾರೆ ಹಾಗೂ ಈ ಜಾತಿಗಳು ರಾಜ್ಯ ಸರ್ಕಾರ ಹೊರಡಿಸಿರುವ ಆರ್ಥಿಕ ದುರ್ಬಲ ವರ್ಗಗಳ ಮೀಸಲಾತಿ ಹಾಗೂ ಕೇಂದ್ರ ಸರ್ಕಾರದ ಇತರೆ ಹಿಂದುಳಿದ ವರ್ಗಗಳ ಮೀಸಲಾತಿಯನ್ನು ಸಹ ಪಡೆಯಬಹುದಾಗಿರುತ್ತದೆ. ಆದುದರಿಂದ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 75 ಬಿಸಿಎ 2019, ದಿನಾಂಕ:14.05.2019ರ ಆದೇಶದ ಅನುಬಂಧ-2ನ್ನು ಹಿಂಪಡೆಯಬಹುದಾಗಿರುತ್ತದೆ ಹಾಗೂ ಕೇಂದ್ರ ಸರ್ಕಾರದ ಮಾದರಿಯಲ್ಲಿ "The persons belonging to EWSs who are not covered under the scheme of reservation for SCs, STs and OBCs shall get 10% reservation in direct recruitment in civil posts and services in the Government of India" ಎಂದು ಆದೇಶಿಸಲು ಕೋರಿರುತ್ತಾರೆ. ಹಾಗೂ ಕೇಂದ್ರ ಸರ್ಕಾರದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ಜಾತಿ ಪಟ್ಟಿಯಲ್ಲಿನ ಜಾತಿಗಳನ್ನು ಹೊರತುಪಡಿಸಿ ಉಳಿದ ಜಾತಿಗಳು ಆರ್ಥಿಕ ದುರ್ಬಲ ವರ್ಗಗಳ ಮೀಸಲಾತಿಯನ್ನು ಪಡೆಯಲು ಅರ್ಹರಿರುವುದಾಗಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಈ ಕುರಿತಂತೆ ಆದಾಯ ಮತ್ತು ಸ್ವತ್ತು ಪ್ರಮಾಣ ಪತ್ರವನ್ನು "ಅಟಲ್‌ಜೀ ಜನ ಸ್ನೇಹಿ ಕೇಂದ್ರಗಳಿಂದ" ವಿತರಿಸುವ ಪ್ರಾಧಿಕಾರವಾದ ಕಂದಾಯ ಇಲಾಖೆಯ ಸಹಮತಿಯನ್ನು ಕೋರಲಾಗಿದ್ದು, ಸದರಿ ಇಲಾಖೆಯು ಸಹಮತಿಯನ್ನು ನೀಡಿರುತ್ತದೆ.

....3

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ :ಹಿಂವಕ 75ಬಿಸಿಎ 2019, ಬೆಂಗಳೂರು,**
**ದಿನಾಂಕ : 31.07.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಭಾರತ ಸರ್ಕಾರದ ನಾಗರೀಕ ಹುದ್ದೆಗಳು, ಸೇವೆಗಳು ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ ಆರ್ಥಿಕವಾಗಿ ದುರ್ಬಲ ವರ್ಗಗಳು (EWSs) ಮೀಸಲಾತಿ ಸೌಲಭ್ಯವನ್ನು ಪಡೆಯಲು ರಾಜ್ಯದ ಅರ್ಹ ಅಭ್ಯರ್ಥಿ / ವಿದ್ಯಾರ್ಥಿಗಳಿಗೆ ಭಾರತ ಸರ್ಕಾರದ ಸಿಬ್ಬಂದಿ, ಕುಂದುಕೊರತೆ ಮತ್ತು ಪಿಂಚಣಿ ಮಂತ್ರಾಲಯದ ಅಧಿಕೃತ ಜ್ಞಾಪನ ಸಂಖ್ಯೆ: F. No.36039/1/2019-Estt (Res.), ದಿನಾಂಕ:19.01.2019 ಮತ್ತು ದಿನಾಂಕ:31.01.2019 ರಲ್ಲಿರುವಂತೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಕೇಂದ್ರ ಸರ್ಕಾರದ ಇತರೆ ಹಿಂದುಳಿದ ವರ್ಗಗಳ (Central OBC) ಪಟ್ಟಿಗಳಲ್ಲಿ ಇರುವ ಜಾತಿಗಳನ್ನು ಹೊರತುಪಡಿಸಿ, ಉಳಿದ ಎಲ್ಲಾ ಜಾತಿಗಳ ಅರ್ಹ ಅಭ್ಯರ್ಥಿಗಳಿಗೆ, ರಾಜ್ಯ ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆ ಆಗದಂತೆ, ಅನುಬಂಧ-1 ರಲ್ಲಿನ "**ಆದಾಯ ಮತ್ತು ಸ್ವತ್ತುಗಳ ಪ್ರಮಾಣ ಪತ್ರ**" ಒದಗಿಸಲು ಅನುಮತಿ ನೀಡಿ ಆದೇಶಿಸಲಾಗಿದೆ.

**ಆದಾಯ ಮತ್ತು ಸ್ವತ್ತು ಪ್ರಮಾಣ ಪತ್ರ** ವಿತರಿಸುವಾಗ ಸಕ್ಷಮ ಪ್ರಾಧಿಕಾರಗಳು PAN CARD, FORM-16, Income Tax Returns File ಮಾಡಿರುವ ಬಗ್ಗೆ ಪರಿಶೀಲಿಸುವುದು. ಇಲ್ಲವಾದಲ್ಲಿ ಅರ್ಜಿದಾರರಿಂದ ಸದರಿ ದಾಖಲೆಗಳು ಕುಟುಂಬದ ಸದಸ್ಯರುಗಳಲ್ಲಿ ಲಭ್ಯವಿರುವುದಿಲ್ಲವೆಂದು ನೋಟರಿಯಿಂದ ದೃಢೀಕರಿಸಿದ Affidavit ನ್ನು ಪಡೆದು ಕುಟುಂಬ ವಾರ್ಷಿಕ ಆದಾಯವನ್ನು ಖಾತರಿ ಪಡಿಸಿಕೊಂಡು ಪ್ರಮಾಣ ಪತ್ರವನ್ನು ವಿತರಿಸತಕ್ಕದ್ದು.

ಮುಂದುವರೆದು, ಈ ಹಿಂದೆ ಭಾರತ ಸರ್ಕಾರದ ನಾಗರೀಕ ಹುದ್ದೆಗಳು, ಸೇವೆಗಳು ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ ಆರ್ಥಿಕವಾಗಿ ದುರ್ಬಲ ವರ್ಗಗಳ (EWSs) ಮೀಸಲಾತಿ ಕಲ್ಪಿಸುವ ಸಂಬಂಧ 144 ಜಾತಿಗಳಿಗೆ ಅನ್ವಯವಾಗುವಂತೆ ಹೊರಡಿಸಿದ್ದ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 75 ಬಿಸಿಎ 2019 ದಿನಾಂಕ:14.05.2019ನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ.

ಈ ಆದೇಶವನ್ನು ಸಚಿವ ಸಂಪುಟದ ಪ್ರಕರಣ ಸಂಖ್ಯೆ:ಸಿ:287/2021, ದಿನಾಂಕ:22.07.2021ರಲ್ಲಿ ನೀಡಿರುವ ಅನುಮೋದನೆಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
V. Akkamahadevi 31/7/21
(ವಿ. ಅಕ್ಕಮಹಾದೇವಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಸಂಕಲನಕಾರರು,**
ಕರ್ನಾಟಕ ರಾಜ್ಯ ಪತ್ರ – ಇವರು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ ಸದರಿ ಸಂಚಿಕೆಯ 500 ಪ್ರತಿಗಳನ್ನು ಮೇಲ್ಕಾಣಿಸಿದ ಕಛೇರಿಗೆ ಒದಗಿಸುವಂತೆ ಕೋರಲಾಗಿದೆ.

**ಇವರಿಗೆ:**

1. ಪ್ರಧಾನ ಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.

2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/. ಕಾರ್ಯದರ್ಶಿಗಳು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು
5. ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಸಭೆ / ವಿಧಾನ ಪರಿಷತ್ತು ಸಚಿವಾಲಯ, ವಿಧಾನಸೌಧ, ಬೆಂಗಳೂರು.
6. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
7. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಬೆಂಗಳೂರು.
8. ರಾಜ್ಯದ ಎಲ್ಲಾ ಪ್ರಾದೇಶಿಕ ಆಯುಕ್ತರು,
9. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
10. ಸರ್ಕಾರದ ಉಪಕಾರ್ಯದರ್ಶಿ (ಸಚಿವಸಂಪುಟ), ವಿಧಾನಸೌಧ. (ಪ್ರಕರಣಸಂಖ್ಯೆ:- ಸಿ:287/2021ಕ್ಕೆ ಸಂಬಂಧಿಸಿದಂತೆ)
11. ಶಾಖಾರಕ್ಷಾಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿ ರವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ,.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು.

Annexure-I

# GOVERNMENT OF __________

(Name & Address of the authority issuing the certificate)

INCOME & ASSESTS CERTIFICATE TO BE PRODUCED BY ECONOMICALLY WEAKER SECTIONS

Certificate No.__________ Date:__________

## VALID FOR THE YEAR________

This is to certify that Shri/Smt./Kumari____________son/daughter/wife of __________________ permanent resident of ______________Village/Street ____________ Post Office ___________ District __________ in the State/Union Territory ___________ Pin Code ________whose photograph is attested below belongs to Economically Weaker Sections, since the gross annual income* of his/her family** is below Rs. 8 lakh (Rupees Eight Lakh only) for the financial year______ His/her family does not own or possess any of the following assets***:

I. 5 acres of agricultural land and above;
II. Residential flat of 1000 sq. ft. and above;
III. Residential plot of 100 sq. yards and above in notified municipalities;
IV. Residential plot of 200 sq. yards and above in areas other than the notified municipalities.

2. Shri/Smt./Kumari_______________ belongs to the ________ caste which is not recognized as a Scheduled Caste, Scheduled Tribe and Other Backward Classes (Central List).

3. The PAN Card, Form-16 and Income Tax Returns are Verified or Affidavit submitted. The details are as follows ____________________________________________

____________________________________and family income is below Rs. 8.00 lakhs.

Signature with seal of Office__________
Name______________________
Designation_________________

Recent Passport size attested photograph of the applicant

*Note 1: Income covered all sources i.e. salary, agriculture, business, profession, etc.

**Note 2: The term "Family" for this purpose include the person, who seeks benefit of reservation, his/her parents and siblings below the age of 18 years as also his/her spouse and children below the age of 18 years.